ಹೊಸ ಪದವಿ ಪೂರ್ವ ಕಾಲೇಜುಗಳ ಮಂಜೂರಾತಿ

495 (894) ಶ್ರೀ ಮಂಜುನಾಥ್ ಹೆಚ್.ಪಿ. (ಹುಣಸೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 2011–12ನೇ ಸಾಲಿನಲ್ಲಿ ಹೊಸದಾಗಿ ಪದವಿ ಪೂರ್ವ ಕಾಲೇಜು ಪ್ರೌಢಶಾಲೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಮೈಸೂರು ಜಿಲ್ಲೆ, ಹುಣಸೂರು ತಾಲ್ಲೂಕಿನ ಹೊಸದಾಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಇಲಾಖೆ ವತಿಯಿಂದ ಅಥವಾ ಜನಪ್ರತಿನಿಧಿಗಳಿಂದ ಬೇಡಿಕೆ ಅಥವಾ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ;

ಇ) ಹಾಗಿದ್ದಲ್ಲಿ, ಅವುಗಳ ವಿವರಗಳನ್ನು ಒದಗಿಸುವುದು;

ಈ) ಸರ್ಕಾರ ಈ ಪ್ರಸ್ತಾವನೆ ಬಗ್ಗೆ ಏನು ಕ್ರಮ ಕೈಗೊಳ್ಳಲಿದೆ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಇಲ್ಲ.

ಸರ್ಕಾರದ ಆದೇಶ ಸಂಖ್ಯೆ:ಎಡಿ 451 ಯೋಯೋಕ 2009 ರಂತೆ ಹಾಲಿ ಪ್ರಾರಂಭಿಸಲಾಗಿರುವ ಸರ್ಕಾರಿ ಪದವಿ ಪೂರ್ವ ಕಾಲೇಜು ಗಳಿಗೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸುವವರೆಗೆ ಹೊಸದಾಗಿ ಸರ್ಕಾರಿ ಪ್ರೌಢ ಶಾಲೆಗಳನ್ನು ಮತ್ತು ಸರ್ಕಾರಿ ಪದವಿಪೂರ್ವ ಕಾಲೇಜು ಗಳನ್ನು ಪ್ರಾರಂಭಿಸದಿರಲು ನಿರ್ಧರಿಸಲಾಗಿದೆ.

ಆ) ಇಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ಹೊಸ ಪದವಿ ಪೂರ್ವ ಕಾಲೇಜುಗಳ ಮಂಜೂರಾತಿ

496 (895) ಶ್ರೀ ಮಂಜುನಾಥ್ ಹೆಚ್.ಪಿ (ಹುಣಸೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ಜಿಲ್ಲೆ, ಹುಣಸೂರು ತಾಲ್ಲೂಕಿನಲ್ಲಿ ಕರಿಮುದ್ದನಹಳ್ಳಿ ಮತ್ತು ಹನಗೂರು ಪದವಿ ಪೂರ್ವ ಕಾಲೇಜುಗಳ ಕಟ್ಟಡ ನಿರ್ಮಾಣ ಕಾಮಗಾರಿಯು ಅರ್ಧಕ್ಕೆ ಸ್ಥಗಿತಗೊಂಡಿದ್ದು, ವಿದ್ಯಾರ್ಥಿಗಳಿಗೆ ಕೊಠಡಿಗಳಿಲ್ಲದೆ ಮರದ ಕೆಳಗೆ ಪಾಠ ಉಪನ್ಯಾಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೆ;

ಆ) ಹಾಗಿದ್ದಲ್ಲಿ, ಯಾವ ಲೆಕ್ಕ ಶೀರ್ಷಿಕೆಯಡಿ ಕಟ್ಟಡ ಕಾಮಗಾರಿ ಕೈಗೊಳ್ಳಲಾಗುತ್ತಿದೆ; ಕಾಮಗಾರಿಗಳು ಸ್ಥಗಿತಗೊಂಡಿರುವುದಕ್ಕೆ ಕಾರಣವೇನು;

ಇ) ಈ ಕಟ್ಟಡ ಪೂರ್ಣಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬಂದಿದೆ. ಕರಿಮುದ್ದನಹಳ್ಳಿ ಮತ್ತು ಹನಗೂರು ಗ್ರಾಮಗಳ ಪದವಿ ಪೂರ್ವ ಕಾಲೇಜುಗಳ ತರಗತಿಗಳನ್ನು ಪ್ರೌಢಶಾಲಾ ವಿಭಾಗದ 7 ಕೊಠಡಿಗಳನ್ನು ಕಾಲೇಜು ವಿಭಾಗಕ್ಕೆ ಉಪಯೋಗಿಸಿಕೊಂಡು ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ತರಗತಿಗಳನ್ನು ನಡೆಸಲಾಗುತ್ತದೆ.

ಆ) ನಬಾರ್ಡ್ ಯೋಜನೆಯಡಿಯ ಆರ್‌ಐಡಿಎಫ್–11 ಮತ್ತು 12 ರಡಿ 2 ಗ್ರಾಮಗಳ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ 4 ಕೊಠಡಿಗಳನ್ನು ನಿರ್ಮಿಸಲಾಗಿದೆ. ಆದರೆ ಅಪೆಡಿಂಕ್ಸ್–ಇ ಅಡಿಯಲ್ಲಿ ಹನಗೂರು ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ 50.19 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕಟ್ಟಡ ಕಾಮಗಾರಿಯನ್ನು ಕೈಗೊಂಡಿದೆ. ಮುಂದಿನ ವರ್ಷಗಳಲ್ಲಿ ಅನುದಾನವನ್ನು ಒದಗಿಸಿಕೊಂಡು ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು.

ಇ) ನಬಾರ್ಡ್ ಯೋಜನೆಯಡಿಯ ಆರ್‌ಐಡಿಎಫ್–11 ಮತ್ತು 12 ರಡಿ 4 ಕೊಠಡಿಗಳನ್ನು ನಿರ್ಮಿಸಲಾಗಿದೆ. ಆದರೆ ಅಪೆಡಿಂಕ್ಸ್–ಇ ಅಡಿಯಲ್ಲಿ ಹನಗೂರು ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ 50.19 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕಟ್ಟಡ ಕಾಮಗಾರಿಯನ್ನು ಕೈಗೊಂಡಿದೆ. ಮುಂದಿನ ವರ್ಷಗಳಲ್ಲಿ ಅನುದಾನವನ್ನು ಒದಗಿಸಿಕೊಂಡು ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು.